## ಕರ್ನಾಟಕ ಸರ್ಕಾರ

ಸಂಖ್ಯೆ:ಯೋಇ 176 ಯೋವಿವಿ 2015

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:23.11.2016

## ಅಧಿಕೃತ ಜ್ಞಾಪನ

ವಿಷಯ: ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಧಾರ್ಮಿಕ ಸ್ಥಳಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ – ಮುಂದುವರಿದ ಮಾರ್ಗಸೂಚಿಗಳು.

ಉಲ್ಲೇಖ:
1. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 73 ಯೋವಿವಿ 2014, ದಿನಾಂಕ:11.03.2015
2. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 73 ಯೋವಿವಿ 2014, ದಿನಾಂಕ:31.03.2015
3. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 176 ಯೋವಿವಿ 2015, ದಿನಾಂಕ:18.01.2016
4. ಅಧಿಕೃತ ಜ್ಞಾಪನ ಸಂಖ್ಯೆ:ಯೋಇ 176 ಯೋವಿವಿ 2015, ದಿನಾಂಕ:28.07.2016

***

ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಧಾರ್ಮಿಕ ಸ್ಥಳಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಾಲಕಾಲಕ್ಕೆ ಸರ್ಕಾರದಿಂದ ಉಲ್ಲೇಖಿತ ಅಧಿಕೃತ ಜ್ಞಾಪನಗಳ ಮೂಲಕ ಮಾರ್ಗಸೂಚಿ/ಸ್ಪಷ್ಟೀಕರಣಗಳನ್ನು ನೀಡಲಾಗಿರುತ್ತದೆ.

ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಧಾರ್ಮಿಕ ಸ್ಥಳಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಈ ಮುಂದಿನ ಮಾರ್ಗಸೂಚಿಗಳನ್ನೂ ಪಾಲಿಸುವಂತೆ ಸೂಚಿಸಲಾಗಿದೆ.

ಮಾನ್ಯ ಶಾಸಕರು ಗುರುತಿಸಿರುವ ಮಂದಿರ, ಮಸೀದಿ ಹಾಗೂ ಪ್ರಾರ್ಥನಾ ಮಂದಿರಗಳ ಅಸ್ತಿತ್ವದ ಬಗ್ಗೆ ಆಯಾ ತಾಲ್ಲೂಕಿನ ತಹಶೀಲ್ದಾರರು ದೃಢೀಕರಣ ಮಾಡುವ ಆಧಾರದ ಮೇಲೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅವುಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬಹುದಾಗಿದೆ.

1. ಇಂತಹ ಪ್ರತಿ ಕಾಮಗಾರಿಗಳ ಅಂದಾಜು ಮೊತ್ತವು ರೂ.5.00 ಲಕ್ಷ (ಐದು ಲಕ್ಷ ರೂಪಾಯಿಗಳು ಮಾತ್ರ) ಮತ್ತು ರೂ.5.00 ಲಕ್ಷಕ್ಕಿಂತ ಕಡಿಮೆಯಿರತಕ್ಕದ್ದು.
2. ಸದರಿ ಅಭಿವೃದ್ಧಿ ಕಾಮಗಾರಿಗಳನ್ನು ಈ ಕೆಳಕಂಡ ಇಲಾಖೆ/ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸತಕ್ಕದ್ದು.
   (ಅ) ಲೋಕೋಪಯೋಗಿ ಇಲಾಖೆ,
   (ಆ) ಕರ್ನಾಟಕ ಗೃಹ ಮಂಡಳಿ,
   (ಇ) ಕ್ರೆಡಲ್,

.......................2

(ಈ) ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ,

(ಉ) ಆರ್‌ಐಟಿಇಎಸ್ (RITES),

(ಊ) ನಿರ್ಮಿತಿ ಕೇಂದ್ರ.

3. ಈ ಕಾಮಗಾರಿಗಳ ಅನುಷ್ಠಾನ ಮತ್ತು ಹಣ ಬಿಡುಗಡೆ ಮಾಡುವ ಪ್ರಕ್ರಿಯೆಯನ್ನು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳು, ಮೇ-2014ರಲ್ಲಿನ ಕಂಡಿಕೆ 4.3 ರಂತೆ ಮಾಡತಕ್ಕದ್ದು.

(ರಫೀ ಅಹಮದ್.ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ರಾಜ್ಯ ಪತ್ರದಲ್ಲಿ ಪ್ರಕಟಿಸಲು ಮತ್ತು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಗೆ 1000 ಪ್ರತಿಗಳನ್ನು ಪೂರೈಸಲು.

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ವಿಧಾನಸಭೆ/ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ.
5. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಗಳು.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
12. ಶಾಖಾಧಿಕಾರಿ, ಸ್ವೀಮರ ಶಾಖೆ, ಯೋಜನಾ ಇಲಾಖೆ (ಕಾಂಪೆಂಡಿಯಮ್‌ಗೋಸ್ಕರ).
13. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

***